# ಹೊರನಾಡ ಕನ್ನಡಿಗರ ಸಂಖ್ಯೆ ಹೆಚ್ಚು

## ವಿಶೇಷ ಕರ್ನಾಟಕ ಏಕೀಕರಣ ೬೦ರ ಉದ್ಘಾಟನಾ ಸಮಾರಂಭದಲ್ಲಿ ಪ್ರೊ.ಕಾಳೇಗೌಡ ನಾಗವಾರ

ಮಂಡ್ಯದ ಗಾಂಧಿಭವನದಲ್ಲಿ ನಡೆದ 'ವಿಶೇಷ ಕರ್ನಾಟಕ ಏಕೀಕರಣ ೬೦' ಕಾರ್ಯಕ್ರಮವನ್ನು ಮಾಜಿ ಶಾಸಕ ಡಾ.ಎಚ್.ಡಿ.ಚೌಡಯ್ಯ ಉದ್ಘಾಟಿಸಿದರು.

ಮಂಡ್ಯ,ಸೆ.೧೨–ಕರ್ನಾಟಕ ಏಕೀಕರಣಕ್ಕೆ ಅನೇಕ ಮಹನೀಯರು ಹೋರಾಟ ಮಾಡಿದ್ದಾರೆ. ಏಕೀಕರಣವಾದಾಗಿನಿಂದಲೂ ಒಳಗಿರುವ ಕನ್ನಡಿಗರಿಗಿಂತ ಹೊರಗಿರುವ ಕನ್ನಡಿಗರ ಸಂಖ್ಯೆ ಹೆಚ್ಚಾಗಿದೆ ಎಂದು ಸಾಹಿತಿ ಮತ್ತು ಸಂಸ್ಕೃತಿ ಚಿಂತಕ ಪ್ರೊ.ಕಾಳೇಗೌಡ ನಾಗವಾರ ತಿಳಿಸಿದರು.

ನಗರದ ಗಾಂಧಿಭವನದಲ್ಲಿ ಮಂಡ್ಯ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಮಂಗಳವಾರ ನಡೆದ 'ವಿಶೇಷ ಕರ್ನಾಟಕ ಏಕೀಕರಣ ೬೦'ರ ಉದ್ಘಾಟನಾ ಸಮಾರಂಭದಲ್ಲಿ ಅವರು ಪ್ರಧಾನ ಭಾಷಣ ಮಾಡಿದರು.

ರಾಜ್ಯದ ಒಳಗಿರುವ ಕನ್ನಡಿಗರಿಗಿಂತ ಹೆಚ್ಚು ಹೊರಗಿದ್ದಾರೆ. ಕನ್ನಡದವರು ಹೆಚ್ಚು ಜ್ಞಾನವಂತರು ಎಂದು ಅಂಬೇಡ್ಕರ್ ಅವರೇ ಹೇಳಿದ್ದಾರೆ. ಕನ್ನಡ ಏಕೀಕರಣಕ್ಕೆ ಕೆಂಗಲ್ ಹನುಮಂತಯ್ಯನವರ ಹೋರಾಟ ಅನನ್ಯವಾಗಿದೆ ಎಂದರು.

ಕುವೆಂಪು ಅವರು ಬಾರಿಸು ಕನ್ನಡ ಡಿಂಡಿಮ ಎಂದು ಹೇಳುತ್ತಾ ಕನ್ನಡ ಪರವಾಗಿ ಹಲವಾರು ಪದ್ಯಗಳನ್ನು ರಚಿಸುವುದರ ಮೂಲಕವೇ ಕರ್ನಾಟಕ ಏಕೀಕರಣಕ್ಕಾಗಿ ಹೋರಾಡಿದ ಮಹಾನ್ ವ್ಯಕ್ತಿ. ಇವರಂತೆ ಬಿಎಂಶ್ರೀ, ಕೆಂಗಲ್ ಹನುಮಂತಯ್ಯ ಕನ್ನಡ ಪರವಾಗಿ ಹೋರಾಡುತ್ತಾ ಕರ್ನಾಟಕ ಏಕೀಕರಣ ಮಾಡಿದರು. ಹಾಗೆ ಹನುಮಂತಯ್ಯ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹುಟ್ಟಿಗೆ ಕಾರಣರಾದರು ಎಂದು ತಿಳಿಸಿದರು.

ಮಂಡ್ಯ ಜಿಲ್ಲೆ ಆದರ್ಶಮಯವಾಗಿದೆ. ಆದರೆ ಹೆಣ್ಣು ಭ್ರೂಣಹತ್ಯೆಯಲ್ಲಿ ರಾಜ್ಯಕ್ಕೆ ೨ನೇ ಸ್ಥಾನ ಹೊಂದಿರುವುದು ವಿಷಾದನೀಯ ಎಂದರು.

**ಆಲೂರು ವೆಂಕಟರಾಯರಿಂದ ಕರೆ:** ಬೆಂಗಳೂರು ಕನ್ನಡ ಸಾಹಿತ್ಯ ಪರಿಷತ್ತು ಕಾರ್ಯದರ್ಶಿ ವ.ಚ.ಚನ್ನೇಗೌಡ ಮಾತನಾಡಿ, ಕನ್ನಡ ನಾಡು ಒಟ್ಟಾಗಿ ಅಭಿವೃದ್ಧಿ ಯಾಗಬೇಕು ಎಂದು ಸ್ವಾತಂತ್ರ್ಯ ಚಳವಳಿಯ ಜತೆಗೆ ಕರ್ನಾಟಕ ಏಕೀಕರಣಕ್ಕೆ ಆಲೂರು ವೆಂಕಟರಾಯರು ಕರೆ ನೀಡಿದ್ದರಿಂದ ಇಂದು ನಾವೆಲ್ಲ ಜತೆಯಾಗಿ ಇದ್ದೇವೆ ಎಂದರು.

ಕರ್ನಾಟಕ ಹರಿದು ಹಂಚಿ ಹೋಗಿದ್ದ ಕಾಲ ದಲ್ಲಿ ಕುವೆಂಪು, ಆಲೂರು ವೆಂಕಟರಾಯ ಹಾಗೂ ಕೆಂಗಲ್ ಹನುಮಂತಯ್ಯರಂತಹ ಹಲವಾರು ಮಹಾನ್ ಹೋರಾಟಗಾರರ ಪರಿಶ್ರಮ ದಿಂದ ಕರ್ನಾಟಕ ಏಕೀಕರಣ ಆಗಲು ಸಾಧ್ಯವಾಯಿತು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಮಾಜಿ ಸಂಸದ ಡಾ.ಜಿ.ಮಾದೇಗೌಡ, ಮಾಜಿ ಶಾಸಕ ಡಾ.ಎಚ್.ಡಿ.ಚೌಡಯ್ಯ ಹಾಗೂ ಬೆಂಗಳೂರು ಭದ್ರತಾ ಮತ್ತು ತನಿಖಾದಳ ನಿರ್ದೇಶಕ ಡಾ.ಎ.ಎನ್.ಪ್ರಕಾಶ್‌ಗೌಡ ಅವರನ್ನು ರೈತ ಸಭಾಂಗಣದಿಂದ ಬೆಂಗಳೂರು–ಮೈಸೂರು ಹೆದ್ದಾರಿಯಲ್ಲಿ ಮೆರವಣಿಗೆ ಮೂಲಕ ಕರೆ ತಂದರು. ಮೈಲ್ಯಾಕ್ ಅಧ್ಯಕ್ಷ ಎಚ್.ಎ.ವೆಂಕಟೇಶ್ ಶಿಕ್ಷಣ ಸಂಸ್ಥೆ ಅಧ್ಯಕ್ಷೆ ಅಂಜನಾ ಶ್ರೀಕಾಂತ್ ಮುಂತಾದವರು ಭಾಗವಹಿಸಿದ್ದರು.

### ಪ್ರೊ.ಕಾಳೇಗೌಡ ನಾಗವಾರರಿಗೆ ಅವಮಾನ

ಕಾರ್ಯಕ್ರಮದಲ್ಲಿ ಸಂಸ್ಕೃತಿ ಚಿಂತಕ ಪ್ರೊ.ಕಾಳೇಗೌಡ ನಾಗವಾರ ಅರ್ಧಗಂಟೆಗೂ ಹೆಚ್ಚು ಕಾಲ ಪ್ರಧಾನ ಭಾಷಣ ಮಾಡಿದರು. ಇದರಿಂದ ಬೇಸತ್ತ ವಿದ್ಯಾರ್ಥಿಗಳು ಮಧ್ಯದಲ್ಲಿಯೇ ಚಪ್ಪಾಳೆ ತಟ್ಟುವ ಮೂಲಕ ಭಾಷಣ ನಿಲ್ಲಿಸಿ ಎಂಬ ಸಂದೇಶ ರವಾನಿಸಿದರು. ಇದರಿಂದ ಬೇಸರಗೊಂಡ ನಾಗವಾರ ಅವರು ಭಾಷಣ ವನ್ನು ಅರ್ಧಕ್ಕೆ ನಿಲ್ಲಿಸಿ, ನಿಮ್ಮ ಈ ನಡವಳಿಕೆಯಿಂದ ನನಗೇನೂ ಬೇಸರವಿಲ್ಲ. ಕರ್ನಾಟಕದ ಇತಿಹಾಸ ತಿಳಿದುಕೊಳ್ಳುವುದು ನಿಮಗೇ ಇಷ್ಟವಿಲ್ಲದಿದ್ದರೆ ಬಿಡಿ ಎಂದು ಹೇಳಿ ಆಸನದಲ್ಲಿ ಕುಳಿತರು.

# ಸಾಕ್ಷರತೆ, ಪರಿಸರ ಅರಿವು ಮೂಡಿಸಲು ಕರೆ

## ಹುಣಸೂರಿನಲ್ಲಿ ನಡೆದ ಸ್ವಚ್ಛತಾ ಕಾರ್ಯಕ್ರಮ

ಹುಣಸೂರು,ಸೆ.೧೨– ಸಾಕ್ಷರತೆ ಹಾಗೂ ಪರಿಸರದ ಬಗ್ಗೆ ಗ್ರಾಮೀಣರಲ್ಲಿ ಸ್ವಾಭಿಮಾನದ ಕನಸನ್ನು ಬಿತ್ತುವ ಕೆಲಸವನ್ನು ಇಂದಿನ ಯುವಕರು ಮಾಡಬೇಕು ಎಂದು ಡಿ.ದೇವರಾಜ ಅರಸು ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಪ್ರೊ.ವೆಂಕಟೇಶಯ್ಯ ಕರೆ ನೀಡಿದರು.

ನಗರದ ಮಂಜುನಾಥ ಬಡಾವಣೆಯಲ್ಲಿರುವ ಆಂಜನೇಯ ದೇವಸ್ಥಾನದ ಆವರಣವನ್ನು ಜ್ಞಾನಧಾರ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕ, ಹುಣಸೂರು ನಗರಸಭೆ ಹಾಗೂ ಮೈಸೂರು ಭಗೀರಥ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ ಸ್ವಚ್ಛತಾ ಭಾರತ್ ಮಿಷನ್ ಯೋಜನೆಯಡಿ ಏರ್ಪಡಿಸಿದ್ದ ಸ್ವಚ್ಛತಾ ಕಾರ್ಯಕ್ರಮವನ್ನು ಗಿಡ ನೆಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಸಾಮಾಜಿಕ ಮೌಲ್ಯಗಳನ್ನು ಬೆಳೆಸಿಕೊಂಡು ಸಮಾಜದಲ್ಲಿರುವ ಓರೆಕೋರೆಗಳನ್ನು ತಿದ್ದುವ ಕೆಲಸ ಮಾಡಬೇಕು. ಸಾರ್ವಜನಿಕರಲ್ಲಿ ಪರಿಸರದ ಬಗ್ಗೆ ಹೆಚ್ಚು ಕಾಳಜಿ ಮೂಡಲು ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು.

ಭಗೀರಥ ಸಂಸ್ಥೆಯ ಸ್ವಚ್ಛ ಭಾರತ್ ಸಂಚಾಲಕ ಜಿ.ಎಸ್.ಜಗದೀಶ್ ಮಾತನಾಡಿ, ಸಾರ್ವಜನಿಕರು ಎಲ್ಲೆಂದರಲ್ಲಿ ಕಸ ಬಿಸಾಡದೆ ನಗರಸಭೆಯ ಪೌರಕಾರ್ಮಿಕರಿಗೆ ಕಸವನ್ನು ಕೊಟ್ಟು, ನಗರವನ್ನು ಸ್ವಚ್ಛವಾಗಿಡಲು ಸಹಕರಿಸಬೇಕು ಎಂದು ಕೋರಿದರು.

ಅಧ್ಯಕ್ಷತೆಯನ್ನು ಜ್ಞಾನಧಾರ ಕಾಲೇಜಿನ ಪ್ರಾಂಶುಪಾಲ ಕೆ.ಎಚ್.ಜಗದೀಶ್ ವಹಿಸಿದ್ದರು. ಮಹೇಶ್ ಚಿಲ್ಕುಂದ ಸ್ವಚ್ಛತೆಯ ಅರಿವಿನ ಗೀತೆಗಳನ್ನು ಹಾಡಿದರು.

ಕಾರ್ಯಕ್ರಮದಲ್ಲಿ ನಗರದ ಹಿರಿಯ ಆರೋಗ್ಯ ಅಧೀಕ್ಷಕ ಸತೀಶ್, ಹಿರಿಯ ಆರೋಗ್ಯ ನಿರೀಕ್ಷಕ ಕೆ.ಜೆ.ಮೋಹನ್, ಭಗೀರಥ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಕೆ.ಎ.ಚಂಗಪ್ಪ, ನಂಜುಂಡಸ್ವಾಮಿ, ಜ್ಞಾನಧಾರ ಕಾಲೇಜಿನ ಉಪನ್ಯಾಸಕರು ಹಾಗೂ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# 'ಪರಿಸರ ಸ್ವಚ್ಛವಾಗಿದ್ದರೆ ಉತ್ತಮ ಆರೋಗ್ಯ'

## ಬನ್ನೂರಿನಲ್ಲಿ ನಡೆದ ಪರಿಸರ ಜಾಗೃತಿ ಕಾರ್ಯಕ್ರಮ

ಬನ್ನೂರಿನ ರೋಟರಿ ಶಾಲೆಯಲ್ಲಿ ಸೋಮವಾರ ಬೃಹತ್ ಪರಿಸರ ಜಾಗೃತಿ ಜಾಥಾವನ್ನು ರೋಟರಿ ರಂಗನಾಥ ಭಟ್ಟ ಉದ್ಘಾಟಿಸಿದರು.

ಬನ್ನೂರು,ಸೆ.೧೨– ನಮ್ಮ ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಂಡರೆ ಉತ್ತಮವಾದ ಆರೋಗ್ಯವನ್ನು ಹೊಂದಬಹುದು ಎಂದು ಕೆನರಾ ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿ ರಂಗನಾಥ ಭಟ್ಟ ಹೇಳಿದರು.

ಬನ್ನೂರಿನ ರೋಟರಿ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಪರಿಸರ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲಿಯೇ ಪರಿಸರ ಜಾಗೃತಿ ವಿಚಾರವನ್ನು ಮನದಟ್ಟು ಮಾಡುವ ಮೂಲಕ ಅವರನ್ನು ಜಾಗೃತಗೊಳಿಸಿ ಪರಿಸರವನ್ನು ರಕ್ಷಿಸುವ ಹೊಣೆ ನಮ್ಮ ಮೇಲಿದೆ. ಶಿಕ್ಷಣದಿಂದ ಮಾತ್ರ ಪರಿಸರ ಜಾಗೃತಿ ಸಾಧ್ಯ ಎಂದು ಅವರು ತಿಳಿಸಿದರು.

ರೋಟರಿ ಉಪಾಧ್ಯಕ್ಷ ಮಹೇಂದ್ರ ಸಿಂಗ್ ಮಾತನಾಡಿದರು. ರಾಜ್ಯ ಒಕ್ಕಲಿಗ ಸಂಘದ ಉಪಾಧ್ಯಕ್ಷ ಪ್ರಸನ್ನಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಮರಿಸ್ವಾಮಿ, ಪುರಸಭಾ ಅಧ್ಯಕ್ಷೆ ಮಂಜುಳಾ ಶ್ರೀನಿವಾಸ್, ಉಪಾಧ್ಯಕ್ಷ ರಾಮಲಿಂಗೇಗೌಡ, ರೋಟರಿ ಅಧ್ಯಕ್ಷ ಬಿ.ಎಸ್.ಯೋಗೇಂದ್ರ, ಕಾರ್ಯದರ್ಶಿ ಹನುಮಂತೇಗೌಡ, ರೋಟರಿಯ ಎಲ್ಲಾ ಸದಸ್ಯರು ಮತ್ತು ಶಿಕ್ಷಕ ವೃಂದವರು ಉಪಸ್ಥಿತರಿದ್ದರು.

ನಂತರ ವಿದ್ಯಾರ್ಥಿಗಳು ಜಾಥಾ ನಡೆಸಿ, ಮಾನವ ಸರಪಳಿ ನಿರ್ಮಿಸಿದರು.

## ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆಗೆ ಖಂಡನೆ

# ರೈತ ಸಂಘದಿಂದ ಹೆದ್ದಾರಿ ತಡೆ

ಮಂಡ್ಯ,ಸೆ.೧೨–ಪತ್ರಕರ್ತೆ, ಚಿಂತಕಿ ಗೌರಿ ಲಂಕೇಶ್ ಹತ್ಯೆ ಖಂಡಿಸಿ ರೈತಸಂಘದ ಕಾರ್ಯಕರ್ತರು ಬೆಂಗಳೂರು–ಮೈಸೂರು ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ನಗರದ ಸರ್ ಎಂ.ವಿಶ್ವೇಶ್ವರಯ್ಯ ಪ್ರತಿಮೆ ಮುಂಭಾಗ ಜಮಾವಣೆಗೊಂಡ ಕಾರ್ಯಕರ್ತರು ರಾಜ್ಯ ಸರ್ಕಾರ ಹಾಗೂ ಗುಪ್ತಚರ ಇಲಾಖೆ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪತ್ರಕರ್ತೆ, ಚಿಂತಕಿ ಗೌರಿ ಲಂಕೇಶ್ ಹತ್ಯೆಯಾಗಿ ಇಷ್ಟು ದಿನಗಳಾದರೂ ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಸರ್ಕಾರ ಹಾಗೂ ಗುಪ್ತಚರ ಇಲಾಖೆ ವಿಫಲವಾಗಿದೆ. ಕೂಡಲೇ ಆರೋಪಿಗಳ ಬಂಧನಕ್ಕೆ ಕ್ರಮ ವಹಿಸಬೇಕು ಎಂದು ಸಂಘದ ಜಿಲ್ಲಾಧ್ಯಕ್ಷ ಶಂಭೂನಹಳ್ಳಿ ಸುರೇಶ್ ಆಗ್ರಹಿಸಿದರು.

ರಾಜ್ಯ ಉಪಾಧ್ಯಕ್ಷ ಕೋಣಸಾಲೆ ನರಸರಾಜು, ತಾಲ್ಲೂಕು ಅಧ್ಯಕ್ಷ ನಾಗಣ್ಣ, ಬೋರ್ಮ್ಮೇಗೌಡ, ಹನಿಯಂಬಾಡಿ ನಾಗರಾಜು, ಲಿಂಗರಾಜಮ್ಮ, ರುಕ್ಮಿಣಿ, ಲತಾ, ಟಿ.ಕೆ.ನಾರಾಯಣ ಸೇರಿದಂತೆ ಮತ್ತಿತರರು ಹಾಜರಿದ್ದರು.

# ಬಿಜೆಪಿ ಓಟಕ್ಕೆ ತಡೆ ಹಾಕಿದ ಫಲಿತಾಂಶ

## ಮೂಗೂರು ಗ್ರಾಮದಲ್ಲಿ ಸಚಿವ ಎಚ್‌ಸಿಎಂ ವಿಶ್ಲೇಷಣೆ

ತಿ.ನರಸೀಪುರ ತಾಲ್ಲೂಕಿನ ಮೂಗೂರು ಗ್ರಾಮದಲ್ಲಿ ಮಹರ್ಷಿ ವಾಲ್ಮೀಕಿ ಭವನ ನಿರ್ಮಾಣಕ್ಕೆ ೧ ಕೋಟಿ ರೂ. ಅನುದಾನ ನೀಡಿದ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರನ್ನು ನಾಯಕ ಸಮುದಾಯದ ಮುಖಂಡರು ಭಾರೀ ಗಾತ್ರದ ಹಾರವನ್ನು ಹಾಕಿ ಸನ್ಮಾನಿಸಿ ಅಭಿನಂದಿಸಿದರು. ವಸತಿ ಯೋಜನೆ ಸಮಿತಿ ಅಧ್ಯಕ್ಷ ಸುನಿಲ್ ಬೋಸ್, ಮಂಡಲ ಪಂಚಾಯಿತಿ ಮಾಜಿ ಪ್ರಧಾನ ಎಂ.ಡಿ.ಬಸವರಾಜು ಇನ್ನಿತರರು ಚಿತ್ರದಲ್ಲಿದ್ದಾರೆ.

ತಿ.ನರಸೀಪುರ,ಸೆ.೧೨– ನಂಜನಗೂಡು ಹಾಗೂ ಗುಂಡ್ಲುಪೇಟೆ ಉಪ ಚುನಾವಣೆಯ ಫಲಿತಾಂಶದ ನಂತರ ರಾಜ್ಯದಲ್ಲಿ ಅಧಿಕಾರ ಹಿಡಿಯುವ ಹವಣಿಕೆಯಲ್ಲಿದ್ದ ಬಿಜೆಪಿಯ ನಾಗಾಲೋಟಕ್ಕೆ ಬ್ರೇಕ್ ಬಿದ್ದಿದ್ದು, ಸಾರ್ವತ್ರಿಕ ವಿಧಾನಸಭೆ ಚುನಾವಣೆಯಲ್ಲಿ ಸ್ಪಷ್ಟ ಬಹುಮತ ಪಡೆಯುವ ಮೂಲಕ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ.ಮಹದೇವಪ್ಪ ಭವಿಷ್ಯ ನುಡಿದರು.

ತಾಲ್ಲೂಕಿನ ಮೂಗೂರು ಗ್ರಾಮದ ಶ್ರೀ ತ್ರಿಪುರ ಸುಂದರಿ ಅಮ್ಮನವರ ದೇವಾಲಯ ಮುಂಭಾಗ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಸಮಾರಂಭದಲ್ಲಿ ಪ್ರಥಮ ಬಾರಿಗೆ ಹೋಬಳಿ ಕೇಂದ್ರವೊಂದರಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಮಾಡಲು ೧ ಕೋಟಿ ರೂ. ಅನುದಾನವನ್ನು ನೀಡಿದ್ದರಿಂದ ನಾಯಕ ಸಮುದಾಯದಿಂದ ಸನ್ಮಾನವನ್ನು ಸ್ವೀಕರಿಸಿ ಅವರು ಮಾತನಾಡಿದರು.

ಚುನಾವಣೆ ಪೂರ್ವದಲ್ಲಿ ನೀಡಿದ್ದ ಭರವಸೆಗಳನ್ನು ಈಡೇರಿಸುವ ಮೂಲಕ ನುಡಿದಂತೆ ನಡೆಯುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಡಳಿತವನ್ನು ಎಲ್ಲಾ ವರ್ಗದ ಜನರು ಮೆಚ್ಚಿಕೊಂಡಿರುವುದರಿಂದ ರಾಜ್ಯದಲ್ಲಿ ಮತ್ತೊಮ್ಮೆ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಲು ಎಲ್ಲಾ ವರ್ಗದ ಜನರು ಉತ್ಸುಕರಾಗಿದ್ದಾರೆ ಎಂದರು.

ಪಕ್ಷಕ್ಕೆ ಎಲ್ಲಾ ಮುಖಂಡರ ನಾಯಕತ್ವದ ಅಗತ್ಯವಿದೆ. ಇಲ್ಲಿ ಯಾರನ್ನೂ ಒಲೈಸಿಕೊಳ್ಳಲಿಕ್ಕೆ ಕೆಲಸ ಮಾಡುತ್ತಿಲ್ಲ. ಧಾರ್ಮಿಕ ಕ್ಷೇತ್ರವಾಗಿರುವ ಮೂಗೂರು ಗ್ರಾಮವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಅವರು ಹೇಳಿದರು.

ವಾಟಾಳು ಮಠದ ಶ್ರೀ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಡಾ.ಎಚ್.ಸಿ.ಮಹದೇವಪ್ಪನವರು ಹಿಂಬಾಲಿಸಿದ್ದರಿಂದಲೇ ಇಂದಿನ ಸರ್ಕಾರದಲ್ಲಿ ಪ್ರಭಾವಿ ಸಚಿವರಾಗಿ ಅಭೂತಪೂರ್ವ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡಲು ಸಾಧ್ಯವಾಯಿತು ಎಂದು ಪ್ರಶಂಸಿಸಿದರು.

ಈ ಸಂದರ್ಭದಲ್ಲಿ ಸಚಿವರನ್ನು ಸ್ವರ್ಣಗೌರಿ ಸಂಘ, ವೀರಶೈವ ಲಿಂಗಾಯತರು, ಅರ್ಚಕರ ಸಂಘ, ಮುಸ್ಲಿಂ ಬಾಂಧವರು, ಶ್ರೀರಾಮ ಕಾಲೋನಿ, ಅಂಬೇಡ್ಕರ್ ಕಾಲೋನಿ ನಿವಾಸಿಗಳು, ಕುರುಬ ಸಮುದಾಯ, ಗಾಣಿಗರ ಸಂಘ, ಮೇದರ ಸಮುದಾಯ, ಸವಿತಾ ಸಮಾಜ ಹಾಗೂ ಮಡಿವಾಳ ಶೆಟ್ಟರ ಸಂಘದ ಮುಖಂಡರು ಸಮುದಾಯದ ಪ್ರಮುಖರೊಂದಿಗೆ ಸನ್ಮಾನಿಸಿದರು.

ಮಂಡಲ ಪಂಚಾಯಿತಿ ಮಾಜಿ ಪ್ರಧಾನ ಎಂ.ಡಿ.ಬಸವರಾಜು, ಅಂಬೇಡ್ಕರ್ ವಸತಿ ಯೋಜನೆ ಸಮಿತಿ ಅಧ್ಯಕ್ಷ ಸುನಿಲ್ ಬೋಸ್, ಗ್ರಾಪಂ ಅಧ್ಯಕ್ಷೆ ಶೋಭಾ ಪುಟ್ಟಮಾದನಾಯಕ, ಪಿಡಿಒ ಎಂ.ಕೆ.ಗಣೇಶ್‌ಮೂರ್ತಿ, ಪಾರುಪತ್ತೇಗಾರ್ ಎಂ.ಬಿ.ಸಾಗರ್, ಪಿಎಸಿಸಿಎಸ್ ಉಪಾಧ್ಯಕ್ಷ ಎಂ.ಶಿವಮೂರ್ತಿ, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಎಂ.ಎಂ.ಬಸವಣ್ಣ, ಕಾರ್ಯದರ್ಶಿ ಎಂ.ನಾಗೇಂದ್ರ, ಕೆಆರ್‌ಐಡಿಎಲ್ ಎಇಇ ಪ್ರಭುಶಂಕರ, ಸಹಾಯಕ ಇಂಜಿನಿಯರ್ ಮಂಜುನಾಥ್, ಜೆಇ ವಿವೇಕ್, ಸಹಾಯಕ ಚಿನ್ನಸ್ವಾಮಿ, ಪ್ರಧಾನ ಅರ್ಚಕ ಎಂ.ಡಿ.ಸುಂದರಪ್ಪ, ಸುಧಾಕರ್, ಶ್ರೀಕಂಠಸ್ವಾಮಿ, ಛಾಯಾಕುಮಾರ್, ಭಾನು, ಮುಜೀರ್ ಖಾನ್, ಬಾಬಾ ಸಾಹೇಬ್, ಮಹದೇವಸ್ವಾಮಿ, ಲಿಂಗರಾಜು, ಕೃಷ್ಣ, ರಾಜು, ಮಾರ್ಕೆಟ್ ನಾಗರಾಜು, ಮೂರ್ತಿ, ಸತೀಶ, ಕುಮಾರಸ್ವಾಮಿ, ಜಲ್ಲಿ ಮಹದೇವಸ್ವಾಮಿ, ಗಂಗಶೆಟ್ಟಿ, ಅಶೋಕ, ಕೃಷ್ಣಶೆಟ್ಟಿ, ಮಹೇಶ, ಎಂ.ಪಿ.ಮರಿಸ್ವಾಮಿ, ಪುಟ್ಟಾಚನಾಯಕ, ವಿನಯ್ ಹಾಗೂ ಇನ್ನಿತರರು ಹಾಜರಿದ್ದರು.

## ಟ್ರಾಕ್ಟರ್ ನಾಲೆಗೆ ಉರುಳಿ ಬಿದ್ದು ಚಾಲಕ ಸಾವು

ಕೃ.ರಾ.ಪೇಟೆ,ಸೆ.೧೨–ತಾಲ್ಲೂಕಿನ ಕತ್ತರಘಟ್ಟ ಗ್ರಾಮದ ಸಮೀಪ ಭೂಮಿಯಲ್ಲಿ ಉಳುಮೆ ಮಾಡುತ್ತಿದ್ದ ಟ್ರಾಕ್ಟರ್ ಗುಡ್ಡದ ಇಳಿಜಾರಿನಲ್ಲಿ ನಿಯಂತ್ರಣ ತಪ್ಪಿ ಕತ್ತರಘಟ್ಟ ಮೈನರ್ ನಾಲೆಗೆ ಉರುಳಿ ಬಿದ್ದ ಪರಿಣಾಮ ಚಾಲಕ ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ಮಂಗಳವಾರ ಬೆಳಿಗ್ಗೆ ೧೦ ಗಂಟೆ ಸಮಯದಲ್ಲಿ ಜರುಗಿದೆ.

ಗ್ರಾಮದ ಅಭಿಷೇಕ್(೨೫) ಸಾವಿಗೀಡಾದವರು. ಗ್ರಾಮದ ಹೊರವಲಯದ ಗುಡ್ಡದ ಇಳಿಜಾರಿನ ಗೋಮಾಳದ ಜಮೀನಿನಲ್ಲಿ ಗ್ರಾಮದ ಕೃಷ್ಣೇಗೌಡರ ಟ್ರಾಕ್ಟರ್ ತೆಗೆದುಕೊಂಡು ಉಳುಮೆ ಮಾಡಲು ಹೋಗಿದ್ದ ಚಾಲಕ ಅಭಿಷೇಕ್ ಟ್ರಾಕ್ಟರ್‌ಅನ್ನು ಹಿಮ್ಮುಖವಾಗಿ ಚಾಲನೆ ಮಾಡಲು ಹೋದಾಗ ನಿಯಂತ್ರಣ ತಪ್ಪಿ ೨೦ ಅಡಿಗೂ ಹೆಚ್ಚಿನ ಆಳದ ಕತ್ತರಘಟ್ಟ ಮೈನರ್ ನಾಲೆಗೆ ಉರುಳಿ ಬಿದ್ದ ಪರಿಣಾಮವಾಗಿ ಇಂಜಿನ್ ಕೆಳಗೆ ಸಿಕ್ಕಿಕೊಂಡು ಸ್ಥಳದಲ್ಲಿಯೇ ಸಾವಿಗೀಡಾಗಿದ್ದಾರೆ. ಘಟನಾ ಸ್ಥಳದಲ್ಲಿ ಗ್ರಾಮಸ್ಥರು ಹಾಗೂ ಮೃತನ ಸಂಬಂಧಿಗಳು ನೂರಾರು ಸಂಖ್ಯೆಯಲ್ಲಿ ಜಮಾಯಿಸಿದ್ದರು. ಮೃತ ಅಭಿಷೇಕ್ ಅವರ ಕುಟುಂಬದ ಸದಸ್ಯರ ರೋದನ ಮುಗಿಲು ಮುಟ್ಟಿತ್ತು. ಮೃತನ ತಂದೆ ನಾರಾಯಣ ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದು ಸರ್ಕಲ್ ಇನ್‌ಸ್ಪೆಕ್ಟರ್ ಎಚ್.ಬಿ.ವೆಂಕಟೇಶಯ್ಯ ಮತ್ತು ಸಬ್‌ಇನ್‌ಸ್ಪೆಕ್ಟರ್ ಕೆ.ಎನ್.ಗಿರೀಶ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಮೃತ ಅಭಿಷೇಕ್ ಅವರ ಮರಣೋತ್ತರ ಪರೀಕ್ಷೆಯನ್ನು ನಡೆಸಿ ಮೃತನ ವಾರಸುದಾರರಿಗೆ ಪಾರ್ಥಿವ ಶರೀರವನ್ನು ಹಸ್ತಾಂತರ ಮಾಡಲಾಯಿತು.

## ಕಂಪಲಾಪುರ ಸರ್ಕಾರಿ ಹಿ.ಪ್ರಾಥಮಿಕ ಶಾಲೆ

# ಹಳೆಯ ವಿದ್ಯಾರ್ಥಿಗಳ ಸಂಘಕ್ಕೆ ಪ್ರದೀಪ್ ಜಾಕಿ ಆಯ್ಕೆ

ಪಿರಿಯಾಪಟ್ಟಣ ತಾಲ್ಲೂಕು ಕಂಪಲಾಪುರ ಸ.ಹಿ.ಪ್ರಾ.ಶಾಲೆಯ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾಗಿ ಪ್ರದೀಪ್ ಜಾಕಿ ಅವಿರೋಧವಾಗಿ ಆಯ್ಕೆಯಾಗಿದ್ದು, ಬೆಂಬಲಿಗರು ಸಂಭ್ರಮಿಸಿದರು.

ಕಂಪಲಾಪುರ,ಸೆ.೧೨– ಪಿರಿಯಾಪಟ್ಟಣ ತಾಲ್ಲೂಕು ಕಂಪಲಾಪುರ ಸ.ಹಿ.ಪ್ರಾ.ಶಾಲೆಯ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾಗಿ ಪ್ರದೀಪ್ ಜಾಕಿ ಅವಿರೋಧವಾಗಿ ಆಯ್ಕೆಯಾದರು.

ಸಾರ್ವಜನಿಕ ಶಿಕ್ಷಣ ಇಲಾಖೆ ಸುತ್ತೋಲೆ ಅನ್ವಯ ಶಾಲಾಭಿವೃದ್ಧಿಗಾಗಿ ಶಾಲೆಯಲ್ಲಿ ವ್ಯಾಸಂಗ ಮಾಡಿದ ಹಳೆಯ ವಿದ್ಯಾರ್ಥಿಗಳನ್ನು ಸಂಘಟಿಸಿ ಸಂಘ ರಚಿಸುವಂತೆ ಎಲ್ಲಾ ಸರ್ಕಾರಿ ಶಾಲೆಗಳಿಗೂ ಸೂಚಿಸಿದ್ದು, ಸಂಘದ ರಚನೆಗಾಗಿ ಶಾಲಾ ಶಿಕ್ಷಕ ವೃಂದ ಹಾಗೂ ಶಾಲಾ ಅಭಿವೃದ್ಧಿ ಮಂಡಳಿಯು ಸೋಮವಾರ ಸಭೆಯನ್ನು ಕರೆದಿತ್ತು.

ಸಭೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಪ್ರದೀಪ್ ಜಾಕಿ ಹೊರತುಪಡಿಸಿ ಯಾವುದೇ ವಿದ್ಯಾರ್ಥಿ ಸ್ಥಾನಕ್ಕೆ ಸ್ಪರ್ಧಿಸದ ಹಿನ್ನೆಲೆಯಲ್ಲಿ ಇವರನ್ನು ನೆರೆದಿದ್ದ ಹಳೆಯ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಅಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿಗಳಾದ ಗ್ರಾಪಂ ಸದಸ್ಯ ಪ್ರಕಾಶಗೌಡ, ಮಾಜಿ ಸದಸ್ಯ ಕಟ್ಟೆ ಜಯಣ್ಣ, ಮಾಜಿ ಅಧ್ಯಕ್ಷ ಹಾಗೂ ಜಾ.ದಳ ಮುಖಂಡ ಕೆ.ಕುಮಾರ್, ಗ್ರಾಪಂ ಮಾಜಿ ಉಪಾಧ್ಯಕ್ಷ ಕೆ.ಎಂ.ಲಕ್ಷ್ಮಣ್, ದಲಿತ ಮುಖಂಡರಾದ ಕೆ.ಇ.ಜಯಣ್ಣ, ಉಮೇಶ್, ಪ್ರದೀಪ್ ಮತ್ತಿತರರು ಹಾಜರಿದ್ದರು.

# ಕಾಡಾನೆ ಹಾವಳಿ ನಿಯಂತ್ರಣಕ್ಕೆ ಆಗ್ರಹ ೧೪ರಂದು ಪ್ರತಿಭಟನೆ ಎಚ್ಚರಿಕೆ

ಎಚ್.ಡಿ.ಕೋಟೆ,ಸೆ.೧೨– ತಾಲ್ಲೂಕಿನ ಭೀಮನಹಳ್ಳಿ ಗ್ರಾಮ ಪಂಚಾಯಿತಿ ಮತ್ತು ಹುಣಸೂರು ತಾಲ್ಲೂಕಿನ ಗುರುಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿಯನ್ನು ನಿಯಂತ್ರಿಸುವಂತೆ ಒತ್ತಾಯಿಸಿ ಭೀಮನಹಳ್ಳಿ ಗ್ರಾಮದ ಹುಣಸೂರು–ಬೀಗೂರು ರಸ್ತೆಯಲ್ಲಿ ರೈತರಿಂದ ಸೆ.೧೪ರಂದು ಬೆಳಿಗ್ಗೆ ೧೧ ಗಂಟೆಗೆ ರಸ್ತೆ ತಡೆ ನಡೆಸಲಾಗುವುದು ಎಂದು ಭೀಮನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಿ.ಸತೀಶ್ ಎಚ್ಚರಿಕೆ ನೀಡಿದರು.

ಪಟ್ಟಣದ ತಾಲ್ಲೂಕು ಪತ್ರಕರ್ತರ ಸಂಘದ ಕಚೇರಿಯಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೂರಾರು ಎಕರೆ ಫಸಲನ್ನು ಆನೆಗಳು ನಾಶಪಡಿಸಿ ನಷ್ಟವುಂಟು ಮಾಡುತ್ತಿವೆ. ಇದನ್ನು ನಿಯಂತ್ರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದೇವೆ ಎಂದರಲ್ಲದೆ, ಈ ಪ್ರತಿಭಟನೆಗೆ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮದ ರೈತರು ಭಾಗವಹಿಸುವಂತೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಭೀಮನಹಳ್ಳಿ ಬಸವರಾಜು, ತಂಬಾಕು ಮಂಡಳಿ ಮಾಜಿ ನಿರ್ದೇಶಕ ಭೀಮನಹಳ್ಳಿ ಮಹದೇವು, ಚನ್ನಪ್ಪ, ವೇಣುಗೋಪಾಲ್ ಇದ್ದರು.

# ೧೫ರಿಂದ ವಿವಿಧೆಡೆ ಅಂಚೆ ಸಂತೆ

ನಂಜನಗೂಡು,ಸೆ.೧೨– ಅಂಚೆ ವಿಭಾಗದ ಅಂಚೆ ಅಧೀಕ್ಷಕರ ಕಚೇರಿ ವತಿಯಿಂದ ಸೆ.೧೫ರಂದು ತಾಲ್ಲೂಕಿನ ಕಳಲೆ ಹೋಬಳಿ ಕೂಗಲೂರು, ೧೯ರಂದು ನಗರ್ಲೆ ಹೋಬಳಿ ಕುಪ್ಪರವಳ್ಳಿ, ೨೨ರಂದು ಬೇಗೂರು ಹೋಬಳಿ ಕಲ್ಲಳ್ಳಿ, ೨೫ರಂದು ಹುರ ಹೋಬಳಿ ಹೆಡಿಯಾಲ ಹಾಗೂ ಸೆ. ೨೬ರಂದು ಕವಲಂದೆ ಹೋಬಳಿ ಹೆಮ್ಮರಗಾಲ ಗ್ರಾಮದಲ್ಲಿ ಅಂಚೆ ಸಂತೆಯನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಅಂಚೆ ಕಚೇರಿ ಉಳಿತಾಯ ಖಾತೆ, ಆವರ್ತಕ ಖಾತೆ, ಸುಕನ್ಯಾ ಸಮೃದ್ಧಿ ಖಾತೆ, ಸಾರ್ವಜನಿಕ ಭವಿಷ್ಯ ನಿಧಿ ಖಾತೆ, ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಜೀವನ ಸುರಕ್ಷಾ ಬಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ, ಗ್ರಾಮೀಣ ಅಂಚೆ ಜೀವ ವಿಮೆ ಮತ್ತು ಅಂಚೆ ಜೀವ ವಿಮೆ ಮುಂತಾದ ಅಂಚೆ ಯೋಜನೆಗಳನ್ನು ಸ್ಥಳದಲ್ಲೇ ಪರಿಶೀಲಿಸಿ ಸ್ವೀಕರಿಸಲಾಗುವುದು. ಸದರಿ ಗ್ರಾಮ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ಇದರ ಸದುಪಯೋಗ ಪಡೆದುಕೊಳ್ಳುವಂತೆ ನಂಜನಗೂಡು ಅಂಚೆ ವಿಭಾಗದ ಅಂಚೆ ಅಧೀಕ್ಷಕ ಜಿ.ಸಿ.ಶ್ರೀನಿವಾಸ್ ಕೋರಿದ್ದಾರೆ.

# ದಕ್ಷಿಣ ಕಾಶಿಯಲ್ಲಿ ಮಕ್ಕಳ ಕಲರವ; ಮನಸೆಳೆದ 'ಪ್ರತಿಭೆ'

## ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿಗೆ ಚಾಲನೆ

ನಂಜನಗೂಡಿನ ಕಾರ್ಮೆಲ್ ಶಾಲಾ ಆವರಣದಲ್ಲಿ ಆಯೋಜಿಸಲಾಗಿದ್ದ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಜಿಪಂ ಸ್ಥಾಯಿ ಸಮಿತಿ ಅಧ್ಯಕ್ಷ ದಯಾನಂದಮೂರ್ತಿ ಚಾಲನೆ ನೀಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ನಾರಾಯಣ, ತಾಪಂ ಸ್ಥಾಯಿ ಸಮಿತಿ ಅಧ್ಯಕ್ಷ ಶಿವಣ್ಣ, ನಗರಸಭಾ ಅಧ್ಯಕ್ಷೆ ಪುಷ್ಪಲತಾ ಮತ್ತಿತರರು ಚಿತ್ರದಲ್ಲಿದ್ದಾರೆ. ಪ್ರತಿಭಾ ಕಾರಂಜಿಯಲ್ಲಿ ಕಂಸಾಳೆ, ಪೂಜಾ ಕುಣಿತ ಹಾಗೂ ಕೋಲಾಟಗಳನ್ನು ಮಕ್ಕಳು ಪ್ರಸ್ತುತಪಡಿಸಿದರು.

ನಂಜನಗೂಡು,ಸೆ.೧೨– ಅಲ್ಲಿ ಮಕ್ಕಳು ಲೋಕವನ್ನೇ ಮರೆತಿದ್ದರು. ಹಾಡಿದರು, ಕುಣಿದರು, ಕುಪ್ಪಳಿಸಿದರು. ಸಂಭ್ರಮದಿಂದ ತಮ್ಮಲ್ಲಿ ಅಡಗಿರುವ ಪ್ರತಿಭೆ ಅನಾವರಣಗೊಳಿಸಿದರು. ಅವಕಾಶ ದೊರೆತರೆ ತಾವೂ ಕಲಾ ಪ್ರದರ್ಶನದಲ್ಲಿ ಕಡಿಮೆಯೇನಲ್ಲ ಎಂದು ಪೋಷಕರಿಗೆ, ಶಿಕ್ಷಕರಿಗೆ ತೋರಿಸಿಕೊಟ್ಟರು. ಮಕ್ಕಳ ಪ್ರತಿಭಾ ಲೋಕದಲ್ಲಿ ಸಾರ್ವಜನಿಕರು ಮುಳುಗಿದ್ದರು.

ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಗರದ ಕಾರ್ಮೆಲ್ ಶಾಲಾ ಆವರಣದಲ್ಲಿ ಆಯೋಜಿಸಲಾಗಿದ್ದ ೨೦೧೭ ನೇ ಸಾಲಿನ ತಾಲ್ಲೂಕು ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಇವೆಲ್ಲಾ ಕಂಡುಬಂದವು.

ಜಿಪಂ ಸ್ಥಾಯಿ ಸಮಿತಿ ಅಧ್ಯಕ್ಷ ದಯಾನಂದ ಮೂರ್ತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ನಮ್ಮ ವಿದ್ಯಾಭ್ಯಾಸದ ಸಮಯದಲ್ಲಿ ಈ ಮಾದರಿಯಲ್ಲಿ ಕಾರ್ಯಕ್ರಮಗಳು ಇಲ್ಲವಾಗಿದ್ದರಿಂದ ನಮ್ಮ ಪ್ರತಿಭೆಯ ಅನಾವರಣಕ್ಕೆ ಅವಕಾಶ ಸಿಗಲಿಲ್ಲ. ಸರ್ಕಾರ ೧೦–೧೨ ವರ್ಷಗಳಿಂದಲೂ ಶಾಲಾ ಮಕ್ಕಳ ಪ್ರತಿಭೆ ಅನಾವರಣಕ್ಕೆ ಈ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ನಾರಾಯಣ ಮಾತನಾಡಿ, ಮುಗ್ಧ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತರಲು ಶಿಕ್ಷಕ ವೃಂದ, ಪೋಷಕರು ಸಹಕರಿಸುವದರ ಮುಖಾಂತರ ತಾಲ್ಲೂಕಿಗೆ ಹೆಸರು ತರಬೇಕೆಂದು ಆಶಿಸಿದರು.

ತಾಪಂ ಸ್ಥಾಯಿ ಸಮಿತಿ ಅಧ್ಯಕ್ಷ ಶಿವಣ್ಣ, ನಗರಸಭಾ ಅಧ್ಯಕ್ಷೆ ಪುಷ್ಪಲತಾ ಮಾತನಾಡಿ, ಹಿಂದಿನ ಶಿಕ್ಷಣಕ್ಕೂ ಈಗ ನಡೆಯುತ್ತಿರುವ ಶಿಕ್ಷಣಕ್ಕೂ ಇರುವ ವ್ಯತ್ಯಾಸದ ಬಗ್ಗೆ ವಿಶ್ಲೇಷಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಮುದ್ದುಮಾದೇಗೌಡ, ಸತೀಶ್, ಶಿವಸ್ವಾಮಿ, ಕೆ.ಜಿ.ಮಹೇಶ್, ಸಂಯೋಜನಾಧಿಕಾರಿ ಲೀಲಮ್ಮ, ರಮೇಶ್, ಸತೀಶ್ ಮತ್ತಿತರು ಹಾಜರಿದ್ದರು.

ಪ್ರತಿಭಾ ಕಾರಂಜಿಯಲ್ಲಿ ಛದ್ಮವೇಷ, ಜಾನಪದ ನೃತ್ಯ, ಕಂಸಾಳೆ, ಪೂಜಾ ಕುಣಿತ, ಭರತನಾಟ್ಯ, ಚಿತ್ರಕಲೆ, ರಂಗೋಲಿ, ಕಥೆ ಹೇಳುವುದು, ಬಾಯಿಪಾಠ ಮೊದಲಾದ ಸ್ಪರ್ಧೆಗಳಲ್ಲಿ ಮಕ್ಕಳು ಪಾಲ್ಗೊಂಡಿದ್ದರು.

> ಮುಗ್ಧ ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತರಲು ಶಿಕ್ಷಕ ವೃಂದ, ಪೋಷಕರು ಸಹಕರಿಸುವುದರ ಮುಖಾಂತರ ತಾಲ್ಲೂಕಿಗೆ ಹೆಸರು ತರಬೇಕು.
> -**ನಾರಾಯಣ,** ಕ್ಷೇತ್ರ ಶಿಕ್ಷಣಾಧಿಕಾರಿ.